# ಪೊಲೀಸ್ ಇಲಾಖೆ

## ಪೊಲೀಸ್ ಸಬ್–ಇನ್ಸ್‌ಪೆಕ್ಟರ್ (ಸಿವಿಲ್) ಹುದ್ದೆಗಳ ನೇಮಕಾತಿ

### (ISO: 9001-2015 ಪ್ರಮಾಣಿತ ನೇಮಕಾತಿ ಪ್ರಕ್ರಿಯೆ)

**ಅಧಿಸೂಚನೆ ಸಂಖ್ಯೆ: 08/ನೇಮಕಾತಿ–2/2021–22**

ವಿಷಯ: ಪೊಲೀಸ್ ಸಬ್–ಇನ್ಸ್‌ಪೆಕ್ಟರ್ (ಸಿವಿಲ್) (ಪುರುಷ & ಮಹಿಳಾ) ಹಾಗೂ ಸೇವೆಯಲ್ಲಿರುವವರು (ಮಿಕ್ಕುಳಿದ) ಮತ್ತು ಕಲ್ಯಾಣ–ಕರ್ನಾಟಕ ಪ್ರದೇಶದ ಸ್ಥಳೀಯ ಹುದ್ದೆಗಳನ್ನು ಒಳಗೊಂಡಂತೆ ಖಾಲಿ ಹುದ್ದೆಗಳ ನೇರ ನೇಮಕಾತಿ ಕುರಿತು.

ಉಲ್ಲೇಖ: ಕರ್ನಾಟಕ ರಾಜ್ಯ ಪತ್ರ ದಿನಾಂಕ: 17.05.2021 ರಲ್ಲಿ ಪ್ರಕಟಿಸಲಾದ ಅಧಿಸೂಚನೆ ಸಂಖ್ಯೆ: 08/ನೇಮಕಾತಿ–2/2021–22

~*~*~*~

ಉಲ್ಲೇಖಿತ ಅಧಿಸೂಚನೆಯನ್ವಯ ಪೊಲೀಸ್ ಇಲಾಖೆಯಲ್ಲಿನ ಪೊಲೀಸ್ ಸಬ್–ಇನ್ಸ್‌ಪೆಕ್ಟರ್ (ಸಿವಿಲ್) (ಪುರುಷ ಮತ್ತು ಮಹಿಳಾ) ಹಾಗೂ ಸೇವೆಯಲ್ಲಿರುವವರು (ಮಿಕ್ಕುಳಿದ) ಮತ್ತು ಕಲ್ಯಾಣ–ಕರ್ನಾಟಕ ಪ್ರದೇಶದ ಸ್ಥಳೀಯ ಖಾಲಿ ಹುದ್ದೆಗಳ ನೇರ ನೇಮಕಾತಿ ಸಲುವಾಗಿ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿರುತ್ತದೆ. ಅರ್ಜಿಯನ್ನು ಆನ್‌ಲೈನ್ ಮುಖಾಂತರ ಸಲ್ಲಿಸಲು ಕೊನೆಯ ದಿನಾಂಕವನ್ನು ವಿಸ್ತರಿಸಿ 31.05.2021 ಸಂಜೆ 06.00 ಗಂಟೆಯವರೆಗೆ ಮತ್ತು ಶುಲ್ಕವನ್ನು ಅಧಿಕೃತ ಬ್ಯಾಂಕ್ ಅಥವಾ ಸ್ಥಳೀಯ ಅಂಚೆ ಕಛೇರಿಗಳ ವೇಳೆಯಲ್ಲಿ ಪಾವತಿಸಲು ಕೊನೆಯ ದಿನಾಂಕ: 02.06.2021ಕ್ಕೆ ನಿಗದಿಗೊಳಿಸಲಾಗಿತ್ತು.

ಪ್ರಸ್ತುತ ರಾಜ್ಯದಲ್ಲಿನ ಲಾಕ್‌ಡೌನ್ ಪರಿಸ್ಥಿತಿಯನ್ನು ಪರಿಗಣನೆಗೆ ತೆಗೆದುಕೊಂಡು ಆಡಳಿತಾತ್ಮಕ ಕಾರಣಗಳಿಂದ ಹಾಗೂ ಅಭ್ಯರ್ಥಿಗಳ ಹಿತದೃಷ್ಟಿಯಿಂದ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು ಮತ್ತೊಮ್ಮೆ ವಿಸ್ತರಿಸಲು ತೀರ್ಮಾನಿಸಿ **ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು 31.05.2021 ರಿಂದ 15.06.2021 ರವರೆಗೆ ಮತ್ತು ಶುಲ್ಕವನ್ನು ಅಧಿಕೃತ ಬ್ಯಾಂಕ್ ಅಥವಾ ಸ್ಥಳೀಯ ಅಂಚೆ ಕಛೇರಿಗಳ ವೇಳೆಯಲ್ಲಿ ಪಾವತಿಸುವ ದಿನಾಂಕವನ್ನು 02.06.2021 ರಿಂದ 17.06.2021 ರವರೆಗೆ ವಿಸ್ತರಿಸಲಾಗಿದೆ.** ಉಲ್ಲೇಖಿತ ಅಧಿಸೂಚನೆ ದಿನಾಂಕ: 03.03.2021ರಲ್ಲಿ ಈಗಾಗಲೇ ನಿಗದಿಪಡಿಸಿರುವಂತೆ ದಿನಾಂಕ: 03.05.2021ನ್ನೇ ವಯೋಮಿತಿಯ ಕೊನೆಯ ದಿನಾಂಕವನ್ನಾಗಿ ಪರಿಗಣಿಸಲಾಗುವುದು. ಆದರೆ ಜಾತಿ ಮತ್ತು ಆದಾಯ ಮೀಸಲಾತಿ ಹಾಗೂ ಇತರೆ ದಾಖಲೆಗಳಿಗೆ ವಿಸ್ತರಿಸಿದ ದಿನಾಂಕವಾದ 15.06.2021ನ್ನು ಕೊನೆಯ ದಿನಾಂಕವಾಗಿ ಪರಿಗಣಿಸಲಾಗುವುದು. ಉಳಿದಂತೆ, ಸದರಿ ಅಧಿಸೂಚನೆಯಲ್ಲಿ ನೀಡಲಾಗಿರುವ ಇತರೆ ಅರ್ಹತಾ ಷರತ್ತುಗಳಲ್ಲಿ ಯಾವುದೇ ಬದಲಾವಣೆಗಳಿರುವುದಿಲ್ಲ.

ಸಹಿ/–
ಅಡಿಷನಲ್ ಡೈರೆಕ್ಟರ್ ಜನರಲ್ ಆಫ್ ಪೊಲೀಸ್,
ನೇಮಕಾತಿ ಹಾಗೂ ಅಧ್ಯಕ್ಷರು,
ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (ಸಿವಿಲ್) ನೇಮಕಾತಿ ಸಮಿತಿ,
ಕಾರ್ಲಟನ್ ಭವನ, ಅರಮನೆ ರಸ್ತೆ,
ಬೆಂಗಳೂರು–560 001.

NARAYANA SINGH SUNITHA BAI

Digitally signed by NARAYANA SINGH SUNITHA BAI
Date: 2021.05.27 13:10:09 +05'30'